## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ : **649 (568)**
ಸದಸ್ಯರ ಹೆಸರು : ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ)
ಉತ್ತರಿಸುವ ದಿನಾಂಕ : 22.07.2024
ಉತ್ತರಿಸುವ ಸಚಿವರು : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

| ಕ್ರ.ಸಂ | ಪ್ರಶ್ನೆ | ವಿವರ |
|---|---|---|
| ಅ) | ಪ್ರಾಥಮಿಕ ಶಾಲೆಗಳಲ್ಲಿ ಬಿ.ಎ., ಬಿ.ಎಸ್.ಸಿ., ಬಿ.ಎಡ್., ಅರ್ಹತೆ ಹೊಂದಿರುವ ಶಿಕ್ಷಕರನ್ನು ಪ್ರೌಢ ಶಾಲೆಗಳಿಗೆ ಬಡ್ತಿ ನೀಡುವ ಪ್ರಕ್ರಿಯೆಯು ಕಳೆದ ಎಷ್ಟು ವರ್ಷಗಳಿಂದ ನಡೆಯುತ್ತಿದೆ; | ಪ್ರಾಥಮಿಕ ಶಾಲೆಗಳಲ್ಲಿ ಬಿ.ಎ., ಬಿ.ಎಸ್.ಸಿ., ಬಿ.ಎಡ್., ಅರ್ಹತೆ ಹೊಂದಿರುವ ಶಿಕ್ಷಕರನ್ನು ಪ್ರೌಢಶಾಲೆಗಳಿಗೆ ಬಡ್ತಿ ನೀಡುವ ಪ್ರಕ್ರಿಯೆಯು ವೃಂದ ಮತ್ತು ನೇಮಕಾತಿ ನಿಯಮ-1967 ರಿಂದ ಕಾಲ ಕಾಲಕ್ಕೆ ನಿಯಮಾನುಸಾರ ಬಡ್ತಿ ನೀಡುತ್ತಿದ್ದು, ಪ್ರಸ್ತುತ 2021ರವರಗೆ ನಡೆದಿರುತ್ತದೆ. |
| ಆ) | ಈಗ ಬಡ್ತಿ ನೀಡುವ ಪ್ರಕ್ರಿಯೆಯು ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; ಬಂದಿದ್ದಲ್ಲಿ ಎಷ್ಟು ವರ್ಷಗಳಿಂದ ಸದರಿ ಪ್ರಕ್ರಿಯೆಯು ಸ್ಥಗಿತಗೊಂಡಿದೆ; | ಪ್ರೌಢಶಾಲಾ ಸಹಶಿಕ್ಷಕರ ಹುದ್ದೆಯ ಬಡ್ತಿಗೆ ಸಂಬಂಧಿಸಿದಂತೆ 2016 ರ ವೃಂದ ಮತ್ತು ನೇಮಕಾತಿ ನಿಯಮಗಳು ಚಾಲ್ತಿಯಲ್ಲಿದ್ದು, ಅದರಲ್ಲಿ ಪಿ.ಎಸ್.ಟಿ ವೃಂದಕ್ಕೆ ಅರ್ಹತೆ ಮತ್ತು ಜೇಷ್ಠತೆ ಹೊಂದಿರುವ ಶಿಕ್ಷಕರಿಗೆ ಬಡ್ತಿ ನೀಡಲು ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಅವಕಾಶ ಕಲ್ಪಿಸಲಾಗಿರುತ್ತದೆ. ಆದರೆ ಜಿ.ಪಿ.ಟಿ ಶಿಕ್ಷಕರ ಬಡ್ತಿಗೆ ಸಂಬಂಧಿಸಿದಂತೆ ಯಾವುದೇ ಮಾನದಂಡಗಳು ನಿಗದಿಯಾಗಿರುವುದಿಲ್ಲ. ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ 6 ರಿಂದ 8ನೇ ತರಗತಿ ಪದವೀಧರ ಶಿಕ್ಷಕರಿಗೆ ಪ್ರೌಢಶಾಲಾ ಸಹ ಶಿಕ್ಷಕರು ಗ್ರೇಡ್-2 ಹುದ್ದೆಗೆ ಬಡ್ತಿ ನೀಡುವ ಕುರಿತು ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯ ಅರ್ಜಿ ಸಂಖ್ಯೆ:3443-3503/2020 ಮತ್ತು 857-917/2021 ಗಳಲ್ಲಿ ಶ್ರೀ. ನಾರಾಯಣ ಬಾಳಪ್ಪ ಮತ್ತಿತರು ದಾಖಲಿಸಿದ್ದ ದಾವೆಗೆ ಸಂಬಂಧಿಸಿದಂತೆ ಮಾನ್ಯ ನ್ಯಾಯಾಲಯವು ದಿನಾಂಕ: 12.05.2021 ರಂದು ತೀರ್ಪು ನೀಡಿದ್ದು, ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆಯಿಂದ ಪ್ರೌಢಶಾಲಾ ಶಿಕ್ಷಕರ ಹುದ್ದೆಗೆ ನೀಡಿರುವ ಬಡ್ತಿಗಳನ್ನು ಹಿಂಪಡೆಯಲು ಸೂಚಿಸಿರುತ್ತದೆ. ಆದ್ದರಿಂದ 3343-3503/2020 ರಲ್ಲಿ ದಿನಾಂಕ:12.05.2021ರ ತೀರ್ಪು ಆದ ನಂತರ ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆಯಿಂದ ಪ್ರೌಢಶಾಲಾ ಸಹಶಿಕ್ಷಕರ ಹುದ್ದೆಗೆ ಬಡ್ತಿ ನೀಡುವುದನ್ನು ತಡೆಹಿಡಿಯಲು ಸೂಚಿಸಲಾಗಿದೆ. |

| | | |
|---|---|---|
| ಇ) | ಪುನಃ ಸದರಿ ಶಿಕ್ಷಕರುಗಳಿಗೆ ಬಡ್ತಿ ನೀಡುವ ಪ್ರಕ್ರಿಯೆಗಳನ್ನು ಯಾವಾಗ ಪ್ರಾರಂಭಿಸಲಾಗುವುದು? | ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯ ಅರ್ಜಿ ಸಂಖ್ಯೆ:3443-3503/2020 ಮತ್ತು 857-917/2021 ಗಳ ತೀರ್ಪನ್ನು ಪ್ರಶ್ನಿಸಿ ಮಾನ್ಯ ಉಚ್ಚ ನ್ಯಾಯಾಲಯ, ಬೆಂಗಳೂರು, ಇಲ್ಲಿ ರಿಟ್ ಪಿಟಿಷನ್ ಸಂಖ್ಯೆ: 16936/2021 ರಲ್ಲಿ ಮೇಲ್ಮನವಿ ಸಲ್ಲಿಸಿದ್ದು, ಸದರಿ ಪ್ರಕರಣದಲ್ಲಿ ದಿನಾಂಕ: 11.07.2024 ರಂದು ಮಾನ್ಯ ನ್ಯಾಯಾಲಯದಲ್ಲಿ ವಿಚಾರಣೆ ನಡೆದಿದ್ದು, ಸದರಿ ವಿಚಾರಣೆಯಲ್ಲಿ ಮಾನ್ಯ ನ್ಯಾಯಾಧೀಶರು ಎರಡು ವಾರದೊಳಗಾಗಿ 2016ರ ವೃಂದ ಮತ್ತು ನೇಮಕಾತಿ ನಿಯಮದ ಕರಡನ್ನು ಪ್ರಕಟಿಸಿ, ಪ್ರತಿಯನ್ನು ಮಾನ್ಯ ನ್ಯಾಯಾಲಯಕ್ಕೆ ಸಲ್ಲಿಸಲು ಸೂಚಿಸಿರುತ್ತದೆ.<br><br>• 2016 ರ ವೃಂದ ಮತ್ತು ನೇಮಕಾತಿ ನಿಯಮಗಳ ಪರಿಷ್ಕರಣೆ ನಡೆಯುತ್ತಿದ್ದು, ಸದರಿ ವೃಂದ ಮತ್ತು ನೇಮಕಾತಿ ನಿಯಮಗಳ ಪರಿಷ್ಕರಣೆಯು ಅಂತಿಮವಾದ ನಂತರ ಪಿ.ಎಸ್.ಟಿ ಮತ್ತು ಜಿ.ಪಿ.ಟಿ ಶಿಕ್ಷಕರಿಗೆ ಬಡ್ತಿ ನೀಡುವ ಸಂಬಂಧ ನಿಯಮಾನುಸಾರ ಪರಿಶೀಲಿಸಿ ಕ್ರಮವಹಿಸಲಾಗುವುದು. |

**ಸಂಖ್ಯೆ: ಇಪಿ 149 ಎಲ್‌ಬಿಪಿ 2024**

**(ಎಸ್. ಮಧು ಬಂಗಾರಪ್ಪ)**
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು